## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

## ಸಿಸಿ ನಂ**. 344/2019**

ಚಾಸಾ-8 ಪ್ರಾಸಾ-3

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 13-10-2025

| | | |
|---|---|---|
| ಹೆಸರು | : | ಕುಪೇಂದ್ರ |
| ತಂದೆಯ ಹೆಸರು | : | ಕಾಳಪ್ಪ |
| ವಯಸ್ಸು | : | 53 ವರ್ಷ |
| ಉದ್ಯೋಗ | : | HC-580 |
| ವಾಸಸ್ಥಳ | : | ಮಾದನಹಿಪ್ಪರಗಾ ಪೋಲಿಸ ಠಾಣೆ |

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-

2017 ರಿಂದ 2022 ರವರೆಗೆ ದೇವಲ ಗಾಣಗಾಪುರ ಪೋಲಿಸ ಠಾಣೆಯಲ್ಲಿ ಮುಖ್ಯಪೋಲಿಸ ಪೇದೆಯಾಗಿ ಕಾರ್ಯನಿರ್ವಹಿಸಿರುತ್ತೇನೆ.

ದಿಃ 12-04-2019 ರಂದು 10-25 ಕ್ಕೆ ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಬಂದು ಜಪ್ತಿ ಪಂಚನಾಮೆ ಹಾಗೂ ಮುದ್ದೆಮಾಲು ಸಮೇತ ವರದಿ ನೀಡಿದ್ದು ಸದರಿ ವರದಿ ಸಾರಾಂಶದ ಮೇರೆಗೆ ಠಾಣೆ ಗುನ್ನೆ ಸಂಖ್ಯೆ 25/2019 ದಾಖಲಿಸಿಕೊಂಡು ಪ್ರ.ವ.ವ. ಅನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ನನ್ನ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ.

ದಿಃ 13-04-2019 ರಂದು ಚಾಸಾ 4 ರಿಂದ 6 ರವರ ಹೇಳಿಕೆ ಪಡೆದಿರುತ್ತೇನೆ. ದಿಃ 15-04-2019 ರಂದು ಅರೋಪಿತನನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ದಿಃ 20-06-2019 ರಂದು ಮಹ್ಮದ ರಫೀಕ ರವರನ್ನು ರಾಸಾಯನಿಕ ಪರೀಕ್ಷೆಗಾಗಿ ನಿಯೋಜಿಸಿ ಅವರಿಗೆ ರಾಸಾಯನಿಕ ಪರೀಕ್ಷೆ ಮನವಿ ಪತ್ರದೊಂದಿಗೆ ಮುದ್ದೆಮಾಲುಗಳನ್ನು ನೀಡಿ ರಾಸಾಯನಿಕ ಪ್ರಯೋಗಾಲಕ್ಕೆ ಕಳುಹಿಸಿಕೊಡಲಾಯಿತು.

ದಿಃ 18-07-2019 ರಂದು ರಾಸಾಯನಿಕ ಪರೀಕ್ಷೆ ವರದಿ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿಃ 20-07-2019 ರಂದು ಮಾನ್ಯ ನ್ಯಾಯಾಲಯಕ್ಕೆ ಅಂತಿಮ ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ.

ಸಾಕ್ಷಿಗೆ ದೂರಿನ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ದೂರನ್ನು ಈಗಾಗಲೇ ನಿಪಿ-**2** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**2**(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಪ್ರ.ವ.ವ. ಅನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ಪ್ರ.ವ.ವ. ಅನ್ನು ನಿಪಿ-**3** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**3**(ಎ) ಎಂದು ಗುರುತಿಸಲಾಯಿತು.

ರಾಸಾಯನಿಕ ಪರೀಕ್ಷಾ ಕೇಂದ್ರದ ವರದಿಯನ್ನು ಸಾಕ್ಷಿಗೆ ತೋರಿಸಿದ್ದು ಸಾಕ್ಷಿ ನೋಡಿ ಗುರುತಿಸಿದ್ದು ವರದಿಯನ್ನು ಈಗ ನಿಪಿ **4** ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**4**(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ನ್ಯಾಯಾಲಯದ ಮುಂದೆ ಇರುವ Original Choice ವಿಸ್ಕಿಯ 34 ಟೆಟ್ರಾ ಪ್ಯಾಕೆಟುಗಳನ್ನು ತೋರಿಸಿದ್ದು ಸಾಕ್ಷಿ ಅವುಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಮು.ಮಾ. 1 ಎಂದು ಗುರುತಿಸಲಾಗಿದೆ. ನ್ಯಾಯಾಲಯದ ಮುಂದೆ ಇರುವ ಆರೋಪಿಗೆ ನೋಡಿ ಸಾಕ್ಷಿ ಗುರುತಿಸುತ್ತಾರೆ.

ಪಾಟೀ ಸವಾಲುಃ ಆರೋಪಿ ಪರ ಶ್ರೀ **SJG** ಪರವಾಗಿ **RMS** ವಕೀಲರಿಂದಃ-

ಮು.ಮಾ. 1 ರಂತೆ ಟೆಟ್ರಾ ಪ್ಯಾಕೆಟುಗಳು ಮದ್ಯದಂಗಡಿಯಲ್ಲಿ ದೊರೆಯುತ್ತವೆ ಎಂದರೆ ಸರಿ. ಗುನ್ಹೆ ಸ್ಥಳ ಮತ್ತು ಪೋಲಿಸ ಠಾಣೆಗೆ 18 ಕಿ.ಮಿ. ಅಂತರವಿದೆ. ಜಪ್ತಿ ಪಂಚನಾಮೆ ಮಾಡಿದ್ದು ಯಾವ ವಾರ ಇರುತ್ತದೆ ಎಂದು ನನಗೆ ಗೊತ್ತಿಲ್ಲ. ಪಂಚರು ದೇವಲ ಗಾಣಗಾಪುರ ಗ್ರಾಮದವರು ಇರುತ್ತಾರೆ.

ಪಂಚರು ಹೆಸರು ಸೋಮನಾಥ ಮತ್ತು ಯಲ್ಲಪ್ಪ ಇರುತ್ತದೆ. ನಾನು ಈ ಪ್ರಕರಣದಲ್ಲಿ ಸರಿಯಾಗಿ ತನಿಖೆ ಮಾಡದೇ ಆರೋಪಿತನ ವಿರುದ್ಧ ಸುಳ್ಳು ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ